ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: [illegible]    ದಿನಾಂಕ : DATE : 10/7/2020

# ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿ

ಉ.ಕಾ 10/7/20

**ಬೆಂಗಳೂರು:** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 9ಕ್ಕೆ ತಿದ್ದುಪಡಿ ತರಲು ಸಂಪುಟ ತೀರ್ಮಾನಿಸಿದೆ.

ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ಯಾವುದೇ ಒಂದು ಪ್ರಕರಣ ದಾಖಲಾದ ನಂತರ ಪ್ರಾಥಮಿಕ ತನಿಖೆ 90 ದಿನಗಳಲ್ಲಿ ಪೂರ್ಣಗೊಳ್ಳಬೇಕು. ದೋಷಾರೋಪ ಪಟ್ಟಿ 6 ತಿಂಗಳೊಳಗೆ ಸಲ್ಲಿಕೆಯಾಗಬೇಕು ಎಂಬ ಮಾನದಂಡ ಸೇರಿಸಲು ನಿರ್ಧರಿಸಲಾಗಿದೆ ಎಂದರು.

## ಕೈಗಾರಿಕೆ ನೀತಿ ಮುಂದೂಡಿಕೆ

2020-25 ನೂತನ ಕೈಗಾರಿಕೆ ನೀತಿ ಕುರಿತು ಚರ್ಚಿಸಿ ಒಪ್ಪಿಗೆ ಪಡೆಯುವ ವಿಚಾರ ಸಂಪುಟದ ವಿಷಯ ಪಟ್ಟಿಯಲ್ಲಿದ್ದರೂ ಮುಂದಿನ ಸಭೆಗೆ ಮುಂದೂಡಲಾಯಿತು. ಕೆಲವೊಂದು ಅಂಶ ಸೇರ್ಪಡೆ ಹಿನ್ನೆಲೆಯಲ್ಲಿ ಮುಂದೂಡಲು ತೀರ್ಮಾನಿಸಲಾಯಿತು ಎಂದು ಹೇಳಲಾಗಿದೆ

## ಕೆಪಿಎಸ್‌ಸಿ ಸದಸ್ಯ ಹುದ್ದೆ: ಮುಖ್ಯಮಂತ್ರಿಗೆ ಅಧಿಕಾರ

ಕೆಪಿಎಸ್‌ಸಿಯಲ್ಲಿ ಒಂದು ಸದಸ್ಯ ಹುದ್ದೆ ಖಾಲಿಯಾಗುತ್ತಿದೆ. ಅದನ್ನು ತುಂಬಲು ಮುಖ್ಯಮಂತ್ರಿಯವರಿಗೆ ಅಧಿಕಾರ ಕೊಡಲಾಗಿದೆ. ಲಕ್ಷ್ಮಿ ನರಸಯ್ಯ ನಿವೃತ್ತಿ ಎಂಬುವರು ಜುಲೈ 13 ಕ್ಕೆ ನಿವೃತ್ತಿಯಾಗುತ್ತಿದ್ದು ಅವರ ಜಾಗ ಬೇರೆಯವರನ್ನು ನೇಮಿಸಬೇಕಾಗಿದೆ. ಆ ಅಧಿಕಾರ ಮುಖ್ಯಮಂತ್ರಿಯವರಿಗೆ ನೀಡಲು ಸಂಪುಟ ತೀರ್ಮಾನಿಸಿತು ಎಂದು ತಿಳಿಸಿದರು. ಶಿವಮೊಗ್ಗ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಪೀಠೋಪಕರಣಗಳ ಖರೀದಿಗೆ 12.8 ಕೋಟಿ ರೂ. ,ರಾಯಚೂರಿನಲ್ಲಿ ಇಂಡಿಯನ್ ಇನ್ಸ್ ಟಿಟ್ಯೂಟ್ ಆಫ್ ಇನ್‌ಫಾರ್ಮೇಷನ್ ಟೆಕ್ನಾಲಜಿ ಸ್ಥಾಪನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ನಾಲ್ಕು ವರ್ಷಗಳಲ್ಲಿ ಮೂಲಸೌಕರ್ಯಕ್ಕೆ 44. 8 ಕೋಟಿ ರೂ.ಒದಗಿಸಲು ಸಂಪುಟ ತೀರ್ಮಾನಿಸಿತು.

## ವಿದೇಶಿ ಬಂಡವಾಳ ಆಕರ್ಷಣೆಗೆ ನಿರ್ಧಾರ

ರಾಜ್ಯಕ್ಕೆ ವಿದೇಶಿ ಬಂಡವಾಳ ಆಕರ್ಷಿಸಲು ಬೋಸ್ಟನ್ ಕನ್ಸಲ್‌ಟಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಅವರನ್ನು ನಾಲೆಡ್ಜ್ ಪಾರ್ಟ್‌ನರ್ಸ್ (ಸಮಾಲೋಚಕರು) ಆಗಿ ನೇಮಿಸಿಕೊಳ್ಳಲು ತೀರ್ಮಾನಿಸಲಾಗಿದೆ. ಅದಕ್ಕಾಗಿ 12 ತಿಂಗಳಿಗೆ 12 ಕೋಟಿ ರೂ.ಗಳನ್ನು ಅವರಿಗೆ ಪಾವತಿಸಲಿದೆ. ಇದರಿಂದ ರಾಜ್ಯದ ಕೈಗಾರಿಕೆ ಸೇರಿ ಇತರೆ ವಲಯಗಳಲ್ಲಿ ವಿದೇಶಿ ಬಂಡವಾಳ ಹೆಚ್ಚಿನ ಪ್ರಮಾಣದಲ್ಲಿ ಹರಿದು ಬರುವ ನಿರೀಕ್ಷೆ ಹೊಂದಲಾಗಿದೆ ಎಂದು ಮಾಧುಸ್ವಾಮಿ ಹೇಳಿದರು. ಇ ಆಡಳಿತಕ್ಕೆ ಅನುಕೂಲವಾಗುವಂತೆ ಇ ಸರ್ವೀಸಸ್ ಒದಗಿಸುವ ಸಂಬಂಧ ಮೆ. ಇಎಚ್‌ಪಿ ಸರ್ವೀಸಸ್ ಇಂಡಿಯಾ ಲಿಮಿಟೆಡ್ ಅವರ ಜತೆಗೂಡಿ 2.0 ಲೇಟೆಸ್ಟ್ ಸಾಫ್ಟ್‌ವೇರ್ ಅಭಿವೃದ್ಧಿ ಸಂಬಂಧ ಮುಂದಿನ 7 ವರ್ಷಕ್ಕೆ 184.37ಕೋಟಿ ರೂ. ವೆಚ್ಚ ಯೋಜನೆಗೆ ಸಂಪುಟ ಒಪ್ಪಿಗೆ ನೀಡಿದೆ. ಹಣಕಾಸು ಇಲಾಖೆ ಶಿಫಾರಸು ಮೇರೆಗೆ ಇದಕ್ಕೆ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು. ವಿಜಯಪುರದಲ್ಲಿ ವಿಮಾನ ನಿಲ್ದಾಣ ಯೋಜನೆಯಡಿ 220ಕೋಟಿ ರೂ. ಮೊತ್ತಕ್ಕೆ ಸಂಪುಟ ಅನುಮೋದನೆ ನೀಡಿದ್ದು ಮೊದಲ ವರ್ಷಕ್ಕೆ 95 ಕೋಟಿ ರೂ.ಗಳನ್ನು ಸಿವಿಲ್ ಕಾಮಗಾರಿಗೆ ಬಿಡುಗಡೆ ಮಾಡಲು ಒಪ್ಪಿಗೆ ನೀಡಲಾಗಿದೆ ಎಂದು ಹೇಳಿದರು.